# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **2302(2669)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ.ಪಿ(ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 25.03.2022 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗಗಳ ಜನಾಂಗದ ವಿದ್ಯಾರ್ಥಿಗಳಿಗೆ 2 ತಾಲ್ಲೂಕುಗಳಲ್ಲಿ ನೂತನವಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಗುತ್ತಿದೆಯೇ; (ವಿವರ ನೀಡುವುದು) | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಇಲಾಖೆಗೆ ಹೊಸ ವಿದ್ಯಾರ್ಥಿನಿಲಯಗಳ ಪ್ರಾರಂಭಕ್ಕೆ ಯಾವುದೇ ಬೇಡಿಕೆ / ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |
| ಆ) | ಸದರಿ ತಾಲ್ಲೂಕುಗಳಲ್ಲಿ ನಿರ್ಮಾಣವಾಗುತ್ತಿರುವ ವಿದ್ಯಾರ್ಥಿ ನಿಲಯಗಳ ಕಾಮಗಾರಿ ವಿವರ ಹಾಗೂ ಬಿಡುಗಡೆಯಾದ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) | ಕೊಡಗು ಜಿಲ್ಲೆ ಮಡಿಕೇರಿ ವಿಧಾನಸಭಾ ಕ್ಷೇತ್ರದಲ್ಲಿನ ತಾಲ್ಲೂಕುಗಳಲ್ಲಿ (ಮಡಿಕೇರಿ ಹಾಗೂ ಸೋಮವಾರಪೇಟೆ) ಕಾರ್ಯನಿರ್ವಹಿಸುತ್ತಿರುವ 26 ವಿದ್ಯಾರ್ಥಿನಿಲಯಗಳ ಪೈಕಿ 17 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 1 ವಿದ್ಯಾರ್ಥಿನಿಲಯ ಉಚಿತ ಕಟ್ಟಡದಲ್ಲಿ ಹಾಗೂ 8 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಅದರಂತೆ, ವಿರಾಜಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿನ ತಾಲ್ಲೂಕುಗಳಲ್ಲಿ (ವಿರಾಜಪೇಟೆ ಮತ್ತು ಸೋಮವಾರಪೇಟೆ) ಕಾರ್ಯ ನಿರ್ವಹಿಸುತ್ತಿರುವ 12 ವಿದ್ಯಾರ್ಥಿನಿಲಯಗಳ ಪೈಕಿ 10 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 01 ವಿದ್ಯಾರ್ಥಿನಿಲಯ ಬಾಡಿಗೆ ಕಟ್ಟಡದಲ್ಲಿ ಹಾಗೂ 01 ಕಟ್ಟಡ ಉಚಿತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತದೆ.<br><br>ಪ್ರಸ್ತುತ, ಮಡಿಕೇರಿ ವಿಧಾನಸಭಾ ಕ್ಷೇತ್ರದಲ್ಲಿನ ತಾಲ್ಲೂಕುಗಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 8 ವಿದ್ಯಾರ್ಥಿನಿಲಯಗಳ ಪೈಕಿ ಒಂದು ವಿದ್ಯಾರ್ಥಿನಿಲಯಕ್ಕೆ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿನ ತಾಲ್ಲೂಕುಗಳಲ್ಲಿ ಬಾಡಿಗೆ ಕಟ್ಟಡದಲ್ಲಿರುವ 01 ವಿದ್ಯಾರ್ಥಿನಿಲಯಕ್ಕೆ ನಿವೇಶನ ಲಭ್ಯವಿದ್ದು, ಆಯವ್ಯಯದ ಲಭ್ಯತೆಯನುಸಾರ ಹಂತ ಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುವುದು. |

| | | |
|---|---|---|
| ಇ). | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹೊಸದಾಗಿ ಯಾವ ಯಾವ ಸೌಲಭ್ಯಗಳು ಲಭ್ಯವಿರುತ್ತವೆ? (ವಿವರ ನೀಡುವುದು) | ಇಲಾಖೆಯ ವತಿಯಿಂದ ಹಿಂದುಳಿದ ವರ್ಗಗಳ ಸಮುದಾಯದವರ ಶೈಕ್ಷಣಿಕ ಹಾಗೂ ಆರ್ಥಿಕಾಭಿವೃದ್ಧಿಗಾಗಿ ಈಗಾಗಲೇ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮ / ಸೌಲಭ್ಯಗಳ ವಿವರಗಳು ಈ ಕೆಳಕಂಡಂತಿವೆ.<br><br>**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**<br>ವಿವರಗಳನ್ನು ಅನುಬಂಧ ದಲ್ಲಿ ನೀಡಲಾಗಿದೆ.<br>**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**<br>1. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ<br>2. ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ<br>3. ಕಿರು ಸಾಲ ಯೋಜನೆ<br>4. ಗಂಗಾ ಕಲ್ಯಾಣ ನೀರಾವರಿ ಯೋಜನೆ<br>5. ಅರಿವು ಶೈಕ್ಷಣಿಕ ಸಾಲ ಯೋಜನೆ<br>**ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ**<br>1. ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆ<br>2. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ<br>3. ಸ್ವಯಂ ಉದ್ಯೋಗ ಸಾಲ ಯೋಜನೆ(ಬ್ಯಾಂಕುಗಳ ಸಹಯೋಗದೊಂದಿಗೆ)<br>4. ಅರಿವು ಶೈಕ್ಷಣಿಕ ಸಾಲ ಯೋಜನೆ<br>5. ಗಂಗಾ ಕಲ್ಯಾಣ ಯೋಜನೆ<br>6. ಮಹಿಳಾ ಸ್ವ-ಸಹಾಯ ಸಂಘಗಳಿಗೆ ಸಾಲ ಯೋಜನೆ<br>7. ಸಾಂಪ್ರಧಾಯಿಕ ವೃತ್ತಿ ಸಾಲ<br>**ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ**<br>1. ಗಂಗಾ ಕಲ್ಯಾಣ ನೀರಾವರಿ ಯೋಜನೆ<br>2. ಅರಿವು ಶೈಕ್ಷಣಿಕ ಯೋಜನೆ<br>3. ಸ್ವಯಂ ಉದ್ಯೋಗ ಸಾಲ ಯೋಜನೆ<br>4. ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ<br>ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ<br>1. ಸ್ವಯಂ ಉದ್ಯೋಗ ಸಾಲ ಯೋಜನೆ<br>2 ಅರಿವು ಶೈಕ್ಷಣಿಕ ಯೋಜನೆ |

**ಸಂಖ್ಯೆ: ಹಿಂವಕ 274 ಬಿಎಂಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ.2669ಕ್ಕೆ ಅನುಬಂಧ**

******

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಹಿಂದುಳಿದ ವರ್ಗಗಳ ಸಮುದಾಯದವರ ಶೈಕ್ಷಣಿಕ ಹಾಗೂ ಆರ್ಥಿಕಾಭಿವೃದ್ಧಿಗಾಗಿ ಅನುಷ್ಠಾನ ಗೊಳಿಸಲಾಗುತ್ತಿರುವ ಕಾರ್ಯಕ್ರಮ / ಸೌಲಭ್ಯಗಳ ವಿವರ**

| ಶೈಕ್ಷಣಿಕ ಕಾರ್ಯಕ್ರಮಗಳು | |
|---|---|
| I | ವಿದ್ಯಾರ್ಥಿನಿಲಯಗಳ ನಿರ್ವಹಣೆ |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು |
| 2 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು |
| 3 | ಸರ್ಕಾರಿ ಆಶ್ರಮಶಾಲೆಗಳು |
| 4 | ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು |
| 5 | ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು |
| 6 | ಖಾಸಗಿ ಅನುದಾನಿತ ಅನಾಥಾಲಯಗಳು |
| 7 | ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ |
| II | ವಿದ್ಯಾರ್ಥಿವೇತನ ಕಾರ್ಯಕ್ರಮಗಳು |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ |
| 3 | ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ |
| 4 | ಶುಲ್ಕ ಮರು ಪಾವತಿ |
| 5 | ಪೂರ್ಣಾವಧಿ ಪಿ.ಎಚ್.ಡಿ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಷಿಫ್ |
| 6 | ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ |
| 7 | ದೇವರಾಜ ಅರಸು ಪ್ರತಿಭಾ ಪುರಸ್ಕಾರ |
| 8 | ನಿಲಯಾರ್ಥಿಗಳಿಗೆ ಪ್ರೋತ್ಸಾಹಧನ |
| 9 | ಐ.ಐ.ಟಿ, ಐ.ಐ.ಎಂ, ಐ.ಐ.ಎಸ್ಸಿ ಇತ್ಯಾದಿಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಬಾರಿ ರೂ.2.00 ಲಕ್ಷ ಪ್ರೋತ್ಸಾಹಧನ |
| III | ತರಬೇತಿ ಕಾರ್ಯಕ್ರಮಗಳು |
| 1 | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ |

| | |
|---|---|
| 2 | ನರ್ಸಿಂಗ್ ತರಬೇತಿ |
| 3 | ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶಕ್ಕೆ ಅನುದಾನ |
| 4 | ಕಾನೂನು ಪದವೀಧರರಿಗೆ ಶಿಷ್ಯವೇತನ |
| 5 | ಹೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ |
| 6 | ಸೇನೆಗಳಿಗೆ ಆಯ್ಕೆಯಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ |
| 7 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ |
| **IV** | **ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಅಭಿವೃದ್ಧಿ ಕಾರ್ಯಕ್ರಮಗಳು** |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ |
| 3 | ಆಶ್ರಮ ಶಾಲೆಗಳ ನಿರ್ವಹಣೆ |
| 4 | ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ |
| 5 | ಅರಿವು ಮೂಡಿಸುವ ಕಾರ್ಯಕ್ರಮ |
| 6 | ಮೂಲಭೂತ ಸೌಕರ್ಯಗಳು |
| 7 | ವಸತಿ ಸೌಲಭ್ಯ |
| **V** | **ವಿವಿಧ ಸಮುದಾಯಗಳ ಅಭಿವೃದ್ಧಿ** |
| 1 | ಹಿಂದುಳಿದ ವರ್ಗಗಳ ಸಮುದಾಯಗಳು ನಿರ್ಮಿಸುವ ಸಮುದಾಯ ಭವನಗಳಿಗೆ ಸಹಾಯಾನುಧಾನ |
| 2 | ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಒಂದು ಬಾರಿಯ ಅನುದಾನ |
| 3 | ದೇವರಾಜ ಅರಸು ಭವನ ನಿರ್ಮಾಣ |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.